ಇ) ಹಾಗಿದ್ದಲ್ಲಿ, ಇದಕ್ಕೆ ತಗಲುವ ಅಂದಾಜು ಮೊತ್ತವೆಷ್ಟು; ಯಾವ ಸಾಲಿನಿಂದ ಪ್ರಾರಂಭಿಸಲಾಗುವುದು?

ಉದ್ಭವಿಸುವುದಿಲ್ಲ

ಸಂಖ್ಯೆ: ಆಕುಕ 32 ಎಂಪಿಎಸ್ 2009

ವೈದ್ಯಕೀಯ ಶಿಕ್ಷಣ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

380 ಶ್ರೀ. ರಮೇಶ ಬಂಡಿಸಿದ್ದೇಗೌಡ ಎ.ಬಿ (ಶ್ರೀರಂಗಪಟ್ಟಣ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅ) ಶ್ರೀರಂಗಪಟ್ಟಣ ಸಾರ್ವಜನಿಕ ಆಸ್ಪತ್ರೆಯನ್ನು 25 ಹಾಸಿಗೆಗಳಿಂದ 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಮಂಜೂರಾತಿ ನೀಡಿದ್ದು, ಇದರ ಕಟ್ಟಡ ನಿರ್ಮಾಣ ಕಾರ್ಯವು ಈವರೆಗೂ ಪ್ರಾರಂಭವಾಗದಿರಲು ಕಾರಣಗಳೇನು?

ಶ್ರೀರಂಗಪಟ್ಟಣ ಸಾರ್ವಜನಿಕ ಆಸ್ಪತ್ರೆಯ 25 ಹಾಸಿಗೆಗಳ ಆಸ್ಪತ್ರೆಯಾಗಿ ಕಾರ್ಯನಿರ್ವಹಿಸುತ್ತಿದ್ದು ಸರ್ಕಾರಿ ಆದೇಶ ಸಂಖ್ಯೆ: ಆಕುಕ 1068 ಸಿಜಿಎಂ 2006, ದಿ: 25–01–2007ರಲ್ಲಿ ಇದನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಲಾಗಿದೆ. ರಾಜ್ಯದಲ್ಲಿ ಹಲವಾರು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಿದ್ದು ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಕಟ್ಟಡ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುವುದು

ಆ) ಈ ಕಾಮಗಾರಿಗಾಗಿ ಒದಗಿಸಲಾಗಿರುವ ಅನುದಾನ ಎಷ್ಟು? ಕಟ್ಟಡ ಕಾಮಗಾರಿ ಕಾರ್ಯ ಯಾವಾಗ ಪ್ರಾರಂಭಿಸಲಾಗುವುದು?

ಅನುದಾನ ನಿಗಧಿಪಡಿಸಿರುವುದಿಲ್ಲ. ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಕಟ್ಟಡ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುವುದು.

ಇ) 100 ಹಾಸಿಗೆಗಳನ್ನಾಗಿ ಮೇಲ್ದರ್ಜೆಗೇರಿಸಿರುವ ಆಸ್ಪತ್ರೆಗೆ ಈವರೆಗೂ ಸಿಬ್ಬಂದಿಗಳನ್ನು/ವೈದ್ಯರನ್ನು ನೇಮಿಸದಿರಲು ಕಾರಣವೇನು ಹಾಗೂ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಆಸ್ಪತ್ರೆ ಕಟ್ಟಡ ಕಾಮಗಾರಿಯು ಶೇ 60% ರಷ್ಟು ಪೂರ್ಣಗೊಂಡ ನಂತರ ಅಗತ್ಯ ಹೆಚ್ಚುವರಿ ಹುದ್ದೆಗಳನ್ನು ಭರ್ತಿ ಮಾಡಬೇಕಾಗುತ್ತದೆ.

ಸಂಖ್ಯೆ: ಆಕುಕ 132 ಸಿಜಿಎಂ 2009

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.